# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ: ರಾಜ್ಯ ಯೋಜನಾ ಮಂಡಳಿಗೆ ಸದಸ್ಯ ಕಾರ್ಯದರ್ಶಿಯನ್ನು ನೇಮಿಸುವ ಬಗ್ಗೆ.**

**ಪ್ರಸ್ತಾವನೆ:**

ರಾಜ್ಯ ಯೋಜನಾ ಮಂಡಳಿಯ ಉಪಾಧ್ಯಕ್ಷರು ದಿನಾಂಕ 16.06.2014 ರಂದು ಕಾರ್ಯವರದಿ ಮಾಡಿಕೊಂಡಿರುತ್ತಾರೆ. ರಾಜ್ಯ ಯೋಜನಾ ಮಂಡಳಿಯ ಕಾರ್ಯಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ನಿರ್ವಹಿಸುವ ನಿಟ್ಟಿನಲ್ಲಿ ಆಡಳಿತಾತ್ಮಕ ಮುಖ್ಯಸ್ಥರಾಗಿ ಕಾರ್ಯನಿರ್ವಹಿಸಲು ಮಂಡಳಿಯ ಪೂರ್ಣಾವಧಿಯ ಸದಸ್ಯ ಕಾರ್ಯದರ್ಶಿಯನ್ನು ಹೊಂದಲು ನಿರ್ಧರಿಸಲಾಗಿದೆ. ಮಾನ್ಯ ಮುಖ್ಯ ಮಂತ್ರಿಗಳ ಹಾಗೂ ರಾಜ್ಯ ಯೋಜನಾ ಮಂಡಳಿಯ ಅಧ್ಯಕ್ಷರ ಸಮಾಲೋಚನೆಯೊಂದಿಗೆ ಮತ್ತು ಅನುಮೋದನೆಯೊಂದಿಗೆ ಶ್ರೀಮತಿ. ಅಭಿಷಾ ಚೌದರಿ, IES., ಅಪರ ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿ ಇವರನ್ನು ಮಂಡಳಿಯ ಸದಸ್ಯ ಕಾರ್ಯದರ್ಶಿಯನ್ನಾಗಿ ನೇಮಕಾತಿ ಮಾಡಲು ತೀರ್ಮಾನಿಸಲಾಗಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ ಕೆಎಸ್‌ಪಿಬಿ/3/ಎಂಎಸ್/2014, ಬೆಂಗಳೂರು, ದಿನಾಂಕ 04.08.2014**

ಶ್ರೀಮತಿ. ಅಭಿಷಾ ಚೌದರಿ, I.E.S., ಅಪರ ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿ ಇವರು ತಮ್ಮ ಮೂಲ ವರ್ಗದಲ್ಲಿ ಹಿರಿಯ ಆಡಳಿತಾತ್ಮಕ ದರ್ಜೆಗೆ ದಿನಾಂಕ 19.06.2014 ರ ಆದೇಶ ಸಂಖ್ಯೆ 13016/2/2014-IES ರಲ್ಲಿ ಬಡ್ತಿ ಹೊಂದಿದ ಕಾರಣ ಈ ಹುದ್ದೆಯು ರಾಜ್ಯ ಸರ್ಕಾರದ ಕಾರ್ಯದರ್ಶಿ ಮಟ್ಟದ ಹುದ್ದೆಗೆ ಸಮನಾಗಿರುತ್ತದೆ. ಇವರನ್ನು ದಿನಾಂಕ 18ರ ಜೂನ್ 2014ರಿಂದ ಜಾರಿಗೆ ಬರುವಂತೆ ರಾಜ್ಯ ಯೋಜನಾ ಮಂಡಳಿಯ ಸದಸ್ಯ-ಕಾರ್ಯದರ್ಶಿಯನ್ನಾಗಿ ನೇಮಕಾತಿ ಮಾಡಲಾಗಿದೆ.

ಈ ಆದೇಶವನ್ನು ರಾಜ್ಯ ಯೋಜನಾ ಮಂಡಳಿಯ ಅಧ್ಯಕ್ಷರೂ ಆಗಿರುವ ಮಾನ್ಯ ಮುಖ್ಯಮಂತ್ರಿಗಳ ಅನುಮೋದನೆ ಮೇರೆಗೆ ಹೊರಡಿಸಲಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್.ಎಸ್.ಜಯದರ),
ಸರ್ಕಾರದ ಅಧೀನ ಕಾರ್ಯದರ್ಶಿ-ಎಸ್-3,
ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು
ಸಾಂಖ್ಯಿಕ ಇಲಾಖೆ.

ಇವರಿಗೆ:
1. ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು
2. ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು.
3. ಮಾನ್ಯ ಮುಖ್ಯ ಮಂತ್ರಿಗಳ ಅಪರ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
4. ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
5. ಕಾರ್ಯದರ್ಶಿಗಳು , ರಾಜ್ಯಪಾಲರ ಸಚಿವಾಲಯ, ರಾಜಭವನ, ಬೆಂಗಳೂರು.
6. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಹೊಸ ದೆಹಲಿ-110021.
7. ಮಾನ್ಯ ಮುಖ್ಯ ಮಂತ್ರಿಗಳ ವಿಶೇಷ ಕರ್ತವ್ಯಾಧಿಕಾರಿ, ವಿಧಾನಸೌಧ, ಬೆಂಗಳೂರು.
8. ಉಪಾಧ್ಯಕ್ಷರ ಆಪ್ತ ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿ, ವಿಕಾಸಸೌಧ, ಬೆಂಗಳೂರು.
9. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ಮೌಲ್ಯ ಮಾಪನ ಪ್ರಾಧಿಕಾರ.
10. ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ, ಬಹುಮಹಡಿ ಕಟ್ಟಡ, ಬೆಂಗಳೂರು.
11. ಯೋಜನಾ ಇಲಾಖೆಯ ಎಲ್ಲಾ ಕಾರ್ಯನಿರ್ವಾಹಕ ವಿಭಾಗಗಳ ನಿರ್ದೇಶಕರು.
12. ಸಂಕಲನಕಾರರು, ಕರ್ನಾಟಕ ಗೆಜೆಟ್, ಬೆಂಗಳೂರು.
13. ಸಂಬಂಧಿಸಿದ ಅಧಿಕಾರಿ, ರಾಜ್ಯ ಯೋಜನಾ ಮಂಡಳಿ.
14. ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.